# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 17-09-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಉಮೇಶ್, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶಾಹೀನಾ, ವೈದ್ಯಾಧಿಕಾರಿಯವರ ಕಛೇರಿ, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಶ್ರೀಮತಿ ವಿನುತ, ಸದಸ್ಯರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)
6. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)
7. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರವಿ, ಕಂದಾಯ ನಿರೀಕ್ಷಕರು,
2. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
3. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಸಂಚಾರ ಮತ್ತು ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
4. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
5. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
6. ಸಂಗೀತಾ, ಸಹಾಯಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ
7. ಶ್ರೀ ಚಂದ್ರು, ಗುತ್ತಿಗೆದಾರರು, ಬೀದಿ ದೀಪ ನಿರ್ವಹಣೆ,
8. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ, ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

**1) ಘನತ್ಯಾಜ್ಯ ನಿರ್ವಹಣೆ:-**

- **ಶ್ರೀಮತಿ ವಿನುತ, ಸದಸ್ಯರು, ರವರು ಮಾತನಾಡಿ,** ಬಿಡಿಎ ಬಡಾವಣೆಯಲ್ಲಿ ಎರಡು ಕಡೆ ಖಾಲಿ ನಿವೇಶನಗಳಲ್ಲಿ ಸಾರ್ವಜನಿಕರು ಅನಧಿಕೃತವಾಗಿ ರಾತ್ರಿ ಸಮಯದಲ್ಲಿ ಕಸವನ್ನು ಎಸೆಯುತ್ತಿರುತ್ತಾರೆ. ಇದರಿಂದ ಸ್ಥಳೀಯರಿಗೆ ತೊಂದರೆಯಾಗಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ ಸಭೆಯಲ್ಲಿ ಹಾಜರಿದ್ದ, ಆರೋಗ್ಯ ನಿರೀಕ್ಷಕರು ಕೂಡಲೇ ಖಾಲಿ ನಿವೇಶನದಲ್ಲಿರುವ ಕಸವನ್ನು ತೆಗೆಯುವುದು ಮತ್ತು ಅನಧಿಕೃತವಾಗಿ ಕಸವನ್ನು ಎಸೆಯುವವರನ್ನು ಪತ್ತೆ ಹಚ್ಚಿ ಮಾರ್ಷಲ್‌ಗಳ ಮುಖಾಂತರ ದಂಡ ವಿಧಿಸಲಾಗುವುದು ಎಂದು ಸಭೆಗೆ ತಿಳಿಸಿದರು.

* **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ರಾಮಯ್ಯ ಬಡಾವಣೆಯಲ್ಲಿ ಇತ್ತೀಚೆಗೆ ಮರಗಳನ್ನು ಟ್ರಿಮ್ ಮಾಡಲಾಗಿದ್ದು, ಮರದ ಕೊಂಬೆ ರೆಂಬೆಗಳನ್ನು ಸದರಿ ಸ್ಥಳದಿಂದ ಸಾಗಾಣಿಕೆ ಮಾಡಿರುವುದಿಲ್ಲವೆಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರು ತೆರವುಗೊಳಿಸಲಾಗುವುದೆಂದು ಸಭೆಗೆ ತಿಳಿಸಿದರು.

2) **ಬೀದಿ ದೀಪಗಳ ನಿರ್ವಹಣೆ:-**

**ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ಎಲ್ಲಾ ಪ್ರದೇಶದಲ್ಲಿ ಬೀದಿ ದೀಪಗಳು ಇದ್ದು ಸಮರ್ಪಕವಾಗಿ ಉರಿಯುತ್ತಿರುತ್ತವೆ ಆದರೆ ಹಲವು ಸ್ಥಳಗಳಿಗೆ ಹೊಸ ಬೀದಿಗಳ ಫಿಟ್ಟಿಂಗ್ಸ್ ಅವಶ್ಯಕತೆ ಇರುತ್ತದೆ ಎಂದು ಹಿಂದಿನ ಸಭೆಯಲ್ಲಿ ಚರ್ಚೆಯಾಗಿರುತ್ತದೆ ಎಂದು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಗುತ್ತಿಗೆದಾರರು ಪ್ರಸ್ತುತ ಹೊಸ ಫಿಟ್ಟಿಂಗ್‌ಗಳು ಲಭ್ಯವಿರುವುದಿಲ್ಲ ಮುಂದಿನ ದಿನಗಳಲ್ಲಿ ಲಭ್ಯತೆಗೆ ಅನುಗುಣವಾಗಿ ಫಿಟ್ಟಿಂಗ್ಸ್‌ಗಳನ್ನು ಅಳವಡಿಸಲಾಗುವುದೆಂದು ಮತ್ತು ಟೈಮರ್‌ಗಳನ್ನು ಹಾಗೂ ಡಿ.ಪಿ ಸ್ವಿಚ್‌ಗಳನ್ನು ಈಗಾಗಲೇ ದುರಸ್ತಿಪಡಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

3) **ಬೃಹತ್ ನೀರುಗಾಲುವೆ:-** ಯಾವುದೇ ಸಮಸ್ಯೆ ಇರುವುದಿಲ್ಲ.

4) **ಆರೋಗ್ಯ ಇಲಾಖೆ:-**

* **ಶ್ರೀಮತಿ ವಿನುತ ಸದಸ್ಯರು, ಹಾಗೂ ಸರಸ್ವತಿ ರವರು ಮಾತನಾಡಿ,** ಫಾಗಿಂಗ್ ಬಗ್ಗೆ ಪ್ರಸ್ತಾಪಿಸಿದಾಗ ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರು ಮಾತನಾಡಿ, ಈಗಾಗಲೇ ಫಾಗಿಂಗ್ ಮಾಡಲಾಗುತ್ತಿದ್ದು, ಈ ವಾರದಲ್ಲಿ ಇನ್ನಷ್ಟು ಸ್ಥಳಗಳಲ್ಲಿ ಮತ್ತಷ್ಟು ಅವಧಿಯನ್ನು ವಿಸ್ತರಿಸಲಾಗುವುದೆಂದು ಸಭೆಗೆ ತಿಳಿಸಿದರು.
* **ಶಾಹೀನಾ, ವೈದ್ಯಾಧಿಕಾರಿಯವರ ಕಛೇರಿ, ವಾರ್ಡ್ ಸಂಖ್ಯೆ29, ಕಾಚರಕನಹಳ್ಳಿ, ರವರು ಮಾತನಾಡಿ,** ಪ್ರಸ್ತುತ 06 ಕೋವಿಡ್ ಸಕ್ರಿಯ ಪ್ರಕರಣಗಳಿದ್ದು, ಹೋಮ್ ಕ್ವಾರಂಟೈನ್ ನಲ್ಲಿ ಇರುವುದಾಗಿ, ಹಾಗೂ ಈವರೆಗೆ ನಮ್ಮ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಈವರೆಗೆ ಕೋವಿಶೀಲ್ಡ್ 73985 ಹಾಗೂ ಕೋವ್ಯಾಕ್ಸಿನ್ 40769 ಲಸಿಕೆಗಳನ್ನು ನೀಡಲಾಗಿರುತ್ತದೆ. ಬೂಸ್ಟರ್ ಡೋಸ್ ಅನ್ನು ಆದ್ಯತೆ ಮೇರೆಗೆ ನಿರಂತರವಾಗಿ ನೀಡಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

5) **ಕಾಮಗಾರಿ ಇಲಾಖೆ:-**

**ಶ್ರೀಮತಿ ಸರಸ್ವತಿ ಹಾಗೂ ಶ್ರೀ ಪಿಳ್ಳಪ್ಪ ರವರು ಮಾತನಾಡಿ,** ಕಮ್ಮನಹಳ್ಳಿ ವಾರ್ಡ್ ಪ್ರದೇಶದಲ್ಲಿ ಪ್ರಸ್ತುತ ಯಾವುದೇ ರಸ್ತೆ ಗುಂಡಿಗಳು ಇರುವುದಿಲ್ಲ, ಕಮ್ಮನಹಳ್ಳಿ ಮುಖ್ಯರಸ್ತೆಯ ಎರಡೂ ಬದಿಯ ಪಾದಾಚಾರಿ ಮಾರ್ಗದಲ್ಲಿ ಟೈಲ್ಸ್‌ಗಳು ಹಾಳಾಗಿದ್ದು, ದಿನನಿತ್ಯ ಸಾರ್ವಜನಿಕರು, ವಯೋವೃದ್ಧರು ಸದರಿ ಪಾದಾಚಾರಿ ಮಾರ್ಗದಲ್ಲಿ ಓಡಾಡಲು ಕಷ್ಟಸಾಧ್ಯವಾಗಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಹಾಜರಿದ್ದ

ಸಹಾಯಕ ಅಭಿಯಂತರರು ಈ ಕಾಮಗಾರಿಯ ಬಗ್ಗೆ ಈಗಾಗಲೇ ಚಾಲನೆ ಮಾಡಲು ಎಲ್ಲಾ ಸಿದ್ದತೆಗಳನ್ನು ಮಾಡಲಾಗಿದ್ದು, ಹಾಳಾಗಿರುವ ಟೈಲ್ಸ್‌ಗಳನ್ನು ತೆಗೆದು ಹೊಸ ಟೈಲ್ಸ್‌ಗಳನ್ನು ಅಳವಡಿಸುವ ಕಾಮಗಾರಿಯನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

6) **ಕಂದಾಯ ಇಲಾಖೆ:-**

ಶ್ರೀ ಪಿಳ್ಳಪ್ಪ (**ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ಹಾಲೀ ಇರುವ ಮತದಾರರ ಗುರುತಿನ ಚೀಟಿಗೆ ಆಧಾರ್ ಕಾರ್ಡ್‌ನ್ನು ಲಿಂಕ್ ಮಾಡುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಕಂದಾಯ ನಿರೀಕ್ಷಕರು ಈ ಬಗ್ಗೆ ಈಗಾಗಲೇ ಸಾರ್ವಜನಿಕರಿಗೆ ತಿಳುವಳಿಕೆ ನೀಡಲಾಗುತ್ತಿದ್ದು, ಕಮ್ಮನಹಳ್ಳಿ ಮುಖ್ಯರಸ್ತೆ ಚರ್ಚ್ ಕ್ಯಾಂಪಸ್ ನಲ್ಲಿ ಸಾರ್ವಜನಿಕರಿಗೆ ಮತದಾರರ ಗುರುತಿನ ಚೀಟಿಗೆ ಆಧಾರ್ ಕಾರ್ಡ್‌ನ್ನು ಲಿಂಕ್ ಮಾಡಲು ಜನಜಾಗೃತಿ ಸಭೆಯನ್ನು ಏರ್ಪಡಿಸಲಾಗುವುದು ಎಂದು ಸಭೆಗೆ ತಿಳಿಸಿದರು.

7) ಉದ್ಯಾನವನಗಳ ವಿಭಾಗ:-

ಶ್ರೀಮತಿ ವಿನುತ, ಸದಸ್ಯರು, **ರವರು ಮಾತನಾಡಿ,** ವಾರ್ಡ್ ವ್ಯಾಪ್ತಿಯಲ್ಲಿರುವ ಪಾರ್ಕ್‌ಗಳಲ್ಲಿ ಕಸವನ್ನು ಗುಡಿಸಿ, ಪಾರ್ಕ್‌ನಲ್ಲೇ ಇಡುತ್ತಿದ್ದು, ಇದನ್ನು ಸಾಗಾಣಿಕೆ ಮಾಡಲಾಗುತ್ತಿರುವುದಿಲ್ಲ ಎಂದು ಸಭೆಗೆ ತಿಳಿಸಿದಾಗ, ಆರೋಗ್ಯ ನಿರೀಕ್ಷಕರು ಮಾತನಾಡಿ, ಹಾಲೀ ಇರುವ ಆಟೋ ಟಿಪ್ಪರ್‌ಗಳಿಗೆ ಟೈ ಅಪ್ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.

8) ಅರಣ್ಯ ವಿಭಾಗ:-

ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ **ಬಡಾವಣೆ** ನಿವಾಸಿಗಳ ಸಂಘ) ರವರು **ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ಹೆಚ್.ಆರ್.ಬಿ.ಆರ್ ಬಡಾವಣೆ, 3ನೇ ಬ್ಲಾಕ್ ನಲ್ಲಿ ಹಲವು ಕಡೆ ಮರಗಳ ಟ್ರಿಮ್ಮಿಂಗ್ ಮಾಡಲಾಗಿದ್ದು, ಇನ್ನೂ ಹಲವು ಕಡೆ ಟ್ರಿಮ್ ಮಾಡುವ ಅವಶ್ಯಕತೆ ಇರುತ್ತದೆ ಎಂದು ಸಭೆಗೆ ತಿಳಿಸಿದಾಗ, ಈ ಬಗ್ಗೆ ಮುಂದಿನ ಸಭೆಯಲ್ಲಿ ಚರ್ಚಿಸಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.

9) **ಪಶುಸಂಗೋಪನೆ ವಿಭಾಗ:-**

**ಶ್ರೀಮತಿ ವಿನುತ, ಸದಸ್ಯರು, ರವರು ಮಾತನಾಡಿ,** ಇತ್ತೀಚಿನ ದಿನಗಳಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಅವುಗಳನ್ನು ನಿಯಂತ್ರಿಸುವ ಬಗ್ಗೆ ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರಿಗೆ ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿಯನ್ನು ನೀಡಿ, ಕೂಡಲೇ ಮುಂದಿನ ಸಭೆಗೆ ಹಾಜರಾಗಲು ತಿಳಿಸಿದರು.

10) ನೀರು ಸರಬರಾಜು:-

ಶ್ರೀ ಪಿಳ್ಳಪ್ಪ (**ಅಧ್ಯಕ್ಷರು, ರಾಮಯ್ಯ ಬಡಾವಣೆ** ನಿವಾಸಿಗಳ ಸಂಘ) ರವರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ನೀರು ಸರಬರಾಜು ಸಮರ್ಪಕವಾಗಿ ಆಗುತ್ತಿದ್ದು, ಕಮ್ಮನಹಳ್ಳಿ ಮುಖ್ಯರಸ್ತೆಯಲ್ಲಿ ಮ್ಯಾನ್‌ಹೋಲ್‌ಗಳನ್ನು ದುರಸ್ತಿ ಪಡಿಸಬೇಕಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದಾಗ, ಸಭೆಯಲ್ಲಿ

ಹಾಜರಿದ್ದ ಬಿಡಬ್ಲ್ಯೂ.ಎಸ್.ಎಸ್. ಸಹಾಯಕ ಅಭಿಯಂತರರು ರವರು ಮಾತನಾಡಿ ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

11) **ಪೊಲೀಸ್/ಸಂಚಾರ ಮತ್ತು ಕಾನೂನು ಸುವ್ಯವಸ್ಥೆ:-**

ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ, ಆಯಿಲ್ ಮಿಲ್ ರಸ್ತೆ, ಹೆಣ್ಣೂರು ಮುಖ್ಯರಸ್ತೆ ಜಂಕ್ಷನ್ ಹಾಗೂ ಶೆಲ್ ಪೆಟ್ರೋಲ್ ಬಂಕ್ ಜಂಕ್ಷನ್ ನಲ್ಲಿ ಹೆಚ್ಚು ಸಂಚಾರ ದಟ್ಟಣೆ ಇದ್ದು, ಪದೇ ಪದೇ ಸಂಚಾರ ದಟ್ಟಣೆ ಹೆಚ್ಚಾಗುತ್ತಿದ್ದು, ಇದನ್ನು ಕೂಡಲೇ ಇದನ್ನು ನಿಯಂತ್ರಿಸಲು ಶೆಲ್ ಪೆಟ್ರೋಲ್ ಬಂಕ್ ಜಂಕ್ಷನ್ ನಲ್ಲಿ ಆರಕ್ಷಕರನ್ನು ನಿಯೋಜಿಸಲು ಸಭೆಗೆ ತಿಳಿಸಿದಾಗ, ಸಭೆಯಲ್ಲಿ ಹಾಜರಿದ್ದ ಸಂಚಾರಿ ಪೊಲೀಸ್ ಅಧಿಕಾರಿಗಳು ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

12) **ಬೆಸ್ಕಾಂ ಇಲಾಖೆ :-** ಯಾವುದೇ ಸಮಸ್ಯೆ ಇರುವುದಿಲ್ಲ.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು<br>ಸಹಾಯಕ ಅಭಿಯಂತರರು<br>ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ | ಅಧ್ಯಕ್ಷರು<br>(ನೋಡೆಲ್ ಅಧಿಕಾರಿಗಳು)<br>ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ |

**ಪ್ರತಿಯನ್ನು**

1) ಜಂಟಿ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.